3. ಸಾಮಾನ್ಯವಾಗಿ ವಿದ್ಯಾರ್ಥನಿಲಯದ ಕಟ್ಟಡ ನಿರ್ಮಾಣದ ಕಾಮಗಾರಿಯನ್ನು ಪೂರ್ಣಗೊಳಿಸಲು ಎರಡು ವರ್ಷಗಳು ಬೇಕಾಗುವುದು. ಆದುದರಿಂದ ಎಲ್ಲಾ ವಿದ್ಯಾರ್ಥಿನಿಲಯಗಳ ಕಾಮಗಾರಿಗಳನ್ನು 1998-99ನೇ ಸಾಲಿನಲ್ಲಿ ಮುಗಿಸಲಾಗುವುದಿಲ್ಲ.

**ಚಿಕ್ಕಮಗಳೂರು ನಗರ ಹಾಗೂ ಇತರ ಭಾಗಗಳ ಅತಿವೃಷ್ಟಿ ಪರಿಹಾರ**

707 - ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಚಿಕ್ಕಮಗಳೂರು ನಗರ ಹಾಗೂ ಇತರೆ ಭಾಗಗಳಲ್ಲಿ 1997ನೇ ಸಾಲಿನ ಸೆಪ್ಟೆಂಬರ್ ಮತ್ತು ಅಕ್ಟೋಬರ್ ಮಾಹೆಯಲ್ಲಿ ಬಂದಂತಹ ಭಾರಿ ಮಳೆಯಿಂದ ಸಾರ್ವಜನಿಕ ಆಸ್ತಿ ಪಾಸ್ತಿ ಹಾನಿಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

*ಆ) ಹಾನಿಯಾಗಿರುವ ಬಗ್ಗೆ ಅಂದಾಜು ಮಾಡಲಾಗಿದೆಯೇ?*

*ಇ) ಪರಿಹಾರ ಕಾಮಗಾರಿಗಳಿಗೆ ಸರ್ಕಾರ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಿದೆ?*

*ಈ) ಬೇಡಿಕೆಯಂತೆ ಸರ್ಕಾರ ಹಣ ಬಿಡುಗಡೆ ಮಾಡಲು ಒಪ್ಪಿದೆಯೇ?*

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಹೌದು.

ಆ) ಹೌದು.

ಇ) ಪರಿಹಾರ ಕಾರ್ಯಗಳಿಗಾಗಿ ಸರ್ಕಾರವು ಇಲ್ಲಿಯವರೆಗೆ ರೂ. 75.00 ಲಕ್ಷಗಳನ್ನು ಬಿಡುಗಡೆ ಮಾಡಿದೆ.

ಈ) ಲಭ್ಯವಿರುವ ಅನುದಾನ ಮತ್ತು ಋತುಮಾನ ಸ್ಥಿತಿಯನ್ನು ಗಮನದಲ್ಲಿರಿಸಿಕೊಂಡು ಸರ್ಕಾರವು ಹಣ ಬಿಡುಗಡೆ ಮಾಡುತ್ತದೆ.

**ಚಿಕ್ಕಮಗಳೂರು ನಗರಸಭೆಗೆ ವಿಶೇಷ ಅನುದಾನ ಬಿಡುಗಡೆ**

708 - ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಚಿಕ್ಕಮಗಳೂರು ನಗರಸಭೆಗೆ ವಿಶೇಷ ಅನುದಾನ ಬಿಡುಗಡೆ ಮಾಡಲು ನಗರಸಭೆ ವತಿಯಿಂದ ಸರ್ಕಾರಕ್ಕೆ ಕೋರಿಕೆ ಬಂದಿದೆಯೇ? (ರಾಜ್ಯದಲ್ಲಿ ಬೇರೆ ಬೇರೆ ನಗರಸಭೆ ಹಾಗೂ ಪುರಸಭೆಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡಿರುವ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು)*